ದಿ.09.04.2019.                    O S 210/2015                PW-1

ಸಾಕ್ಷಿಯನ್ನು ಕರೆಯಿಸಲಾಯಿತು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಶ್ರೀ ಆರ್ ವಿ ಕೆ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಇದರಲ್ಲಿರುವ ವಿಚಾರಗಳೆಲ್ಲವೂ ಸತ್ಯವಾಗಿರುತ್ತವೆ, ಇವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ನನ್ನ ಕುಟುಂಬದ ವಂಶ ವೃಕ್ಷವನ್ನು ಹಾಜರುಪಡಿಸುತ್ತಿದ್ದೇನೆ ಇದನ್ನು **ನಿಪಿ-1** ಎಂದು ಗುರುತಿಸಲಾಯಿತು. ದಾವಾ ತಪಸೀಲು 1 ರಿಂದ 7 ಸ್ವತ್ತುಗಳ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸುತ್ತಿದ್ದೇನೆ ಇವುಗಳನ್ನು ಕ್ರಮವಾಗಿ **ನಿಪಿ-2** ರಿಂದ **ನಿಪಿ-8** ರವರೆಗೆ ಗುರುತಿಸಲಾಯಿತು. ದಾವಾ ತಪಸೀಲು 8 ಸ್ವತ್ತಿನ ತೆರಿಗೆ ಬೇಡಿಕೆ ನಿರ್ದರಣ ಪಟ್ಟಿಯ ಧೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದೇನೆ ಇದನ್ನು **ನಿಪಿ-9** ಎಂದು ಗುರುತಿಸಲಾಯಿತು. ಮೂಲ ವಾದಿ ಚಿಕ್ಕ ಮರೀಗೌಡರ ಮರಣ ಪತ್ರವನ್ನು ಹಾಜರುಪಡಿಸುತ್ತಿದ್ದೇನೆ ಇದನ್ನು **ನಿಪಿ-10** ಎಂದು ಗುರುತಿಸಲಾಯಿತು. ದಾವಾ ಆಸ್ತಿಗಳ ಎರಡು ಕಂದಾಯ ರಸೀದಿಗಳನ್ನು ಹಾಜರುಪಡಿಸುತ್ತಿದ್ದೇನೆ ಇವುಗಳನ್ನು **ನಿಪಿ-11 ಹಾಗೂ ನಿಪಿ-12** ಎಂದು ಗುರುತಿಸಲಾಯಿತು. 1 ನೇ ಪ್ರತಿವಾದಿಯ ವಿರುದ್ದ ಪೋಲೀಸ್ ಠಾಣೆಯಲ್ಲಿ ನೀಡಿದ ಸ್ವೀಕೃತಿ ಹಾಗೂ ಹಿಂಬರಹಗಳನ್ನು ಹಾಜರುಪಡಿಸುತ್ತಿದ್ದೇನೆ ಇವುಗಳನ್ನು **ನಿಪಿ-13 ಹಾಗೂ ನಿಪಿ-14** ಎಂದು ಗುರುತಿಸಲಾಯಿತು.

**3 ರಿಂದ 5 ನೇ ಪ್ರತಿವಾದಿ ಪರವಾಗಿ ಶ್ರೀ ಎಮ್ ಹೆಚ್ ಯು ವಕೀಲರು**

O S 210 /2015

**ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ. 9 ನೇ ಪ್ರತಿವಾದಿಯ ಪರವಾಗಿ ಎನ್ ಎಮ್ ಕೆ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿರುತ್ತಾರೆ. ಸಮಯ ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸ ಓ

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ. ಎಂ.ಎಫ್.ಸಿ ಚನ್ನಪಟ್ಟಣ.